# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 921 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14-07-2023 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

*******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಟೆಂಡರ್ ಮತ್ತು ನೇಮಕಾತಿಗಳಲ್ಲಿ ಭ್ರಷ್ಟಾಚಾರ ನಡೆದಿರುವುದು ನಿಜವೇ; ಹೌದಾದಲ್ಲಿ, ಎಷ್ಟು ಕೋಟಿ ಭ್ರಷ್ಟಾಚಾರ ನಡೆದಿದೆ; | ಬೀದರ್ ಜಿಲ್ಲೆಯಲ್ಲಿ ಟೆಂಡರ್ ಮತ್ತು ನೇಮಕಾತಿಗಳಲ್ಲಿ ಭ್ರಷ್ಟಾಚಾರ ನಡೆದಿರುವ ಸಂಬಂಧ ದಿನಾಂಕ:25.11.2022 ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ದಿಶಾ ಸಮಿತಿಯ ನಡವಳಿಯಲ್ಲಿ ಪ್ರಸ್ತಾಪವಾಗಿರುತ್ತದೆ. ಸಭೆಗೆ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೀದರ್ ಇವರು ತಪ್ಪು ಮಾಹಿತಿ ನೀಡಿರುವ ಬಗ್ಗೆ, ಸದಸ್ಯರು, ರಾಜ್ಯ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತುವಾರಿ ದಿಶಾ ಸಮಿತಿ ಇವರು ಸರ್ಕಾರಕ್ಕೆ ದಿನಾಂಕ:06.01.2023ರಂದು ವರದಿ ಮಾಡಿರುತ್ತಾರೆ. |
| (ಆ) | ಈ ಭ್ರಷ್ಟಾಚಾರದಲ್ಲಿ ಶಾಮೀಲಾಗಿದ್ದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ; ಕ್ರಮ ಕೈಗೊಳ್ಳದಿದ್ದರೆ ಇದಕ್ಕೆ ಕಾರಣವೇನು; | ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೀದರ್ ಇವರು ದಿನಾಂಕ:25.11.2022ರಂದು ನಡೆದ ಸಭೆಗೆ ತಪ್ಪು ಮಾಹಿತಿ ನೀಡಿರುವ ಬಗ್ಗೆ ಹಾಗೂ ಮೇಲಾಧಿಕಾರಿಗಳ ಆದೇಶದ ಅನುಪಾಲನೆಯಲ್ಲಿ ನಿರ್ಲಕ್ಷ ವಹಿಸಿದ ಸಂಬಂಧ ಕೂಲಂಕಷ ತನಿಖೆ ನಡೆಸಿ, ತನಿಖಾ ವರದಿಯನ್ನು ಸಲ್ಲಿಸುವಂತೆ ದಿನಾಂಕ:14.03.2023ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್ ಇವರನ್ನು ಕೋರಲಾಗಿರುತ್ತದೆ. ನಂತರ 12.05.2023ರ ಅನುಸರಣಾ ಪತ್ರದಲ್ಲಿಯೂ ಸಹ ಕೋರಲಾಗಿರುತ್ತದೆ. ಈ ಮಧ್ಯೆ ಇಲಾಖೆಯಿಂದಲೂ ಸಹ ಪ್ರಕರಣ ಸಂಬಂಧ ತನಿಖೆ ನಡೆಸಲು ನಿರ್ಧರಿಸಿ ಹಿರಿಯ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ತನಿಖಾ ತಂಡ ರಚಿಸಿ ತನಿಖೆ ನಡೆಸಲು ಆದೇಶಿಸಲಾಗಿದೆ. |
| (ಇ) | ಈ ಕುರಿತು ಜಿಲ್ಲಾ ದಿಶಾ ಸಮಿತಿ ರಾಜ್ಯ ಸರ್ಕಾರಕ್ಕೆ ಕ್ರಮ ಕೈಗೊಳ್ಳುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು? | ಜಿಲ್ಲಾ ದಿಶಾ ಸಮಿತಿಯು ಸಲ್ಲಿಸಿರುವ ಪ್ರಸ್ತಾವನೆ ಸಂಬಂಧ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್ ಜಿಲ್ಲೆ ಇವರು ಸಲ್ಲಿಸುವ ತನಿಖಾ ವರದಿ ಮತ್ತು ಇಲಾಖೆಯ ಹಿರಿಯ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ತನಿಖಾ ತಂಡವು ಸಲ್ಲಿಸುವ ವರದಿಗಳನ್ನು ಪರಿಶೀಲಿಸಿದ ನಂತರ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು. ಮುಂದುವರೆದಂತೆ, ಈಗಾಗಲೇ ಸಂಬಂಧಪಟ್ಟ ಉಪ ನಿರ್ದೇಶಕರನ್ನು ಬೀದರ್ ಜಿಲ್ಲೆಯಿಂದ ವರ್ಗಾವಣೆ ಮಾಡಲಾಗಿರುತ್ತದೆ. |

**ಸಂಖ್ಯೆ: ಮಮಇ 272 ಎಸ್‌ಜೆಡಿ 2023.**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.